ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	1869
ಸದಸ್ಯರ ಹೆಸರು	:	ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	24.03.2020
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕ.ಸಂ.	ಪ್ರಶ್ನೆ	ಉತ್ತರ
(ಅ)	ರಾಯಚೂರು ನಗರಸಭೆಯನ್ನು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ಪತ್ರ ಸಂಖ್ಯೆ: ನಅಇ 14 ಎಂಎಲ್‌ಆರ್ 2019, ದಿನಾಂಕ:05.08.2019ರಲ್ಲಿ ರಾಯಚೂರು ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಲು ನಿಯಮಾನುಸಾರ ಅಗತ್ಯ ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಸುವಂತೆ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಮತ್ತು ಜಿಲ್ಲಾಧಿಕಾರಿ, ರಾಯಚೂರು ಜಿಲ್ಲೆ ಇವರಿಗೆ ತಿಳಿಸಲಾಗಿದೆ. ಆದೇಶ ಸಂಖ್ಯೆ: ಆರ್‌ಡಿ 18 ಎಲ್‌ಆರ್‌ಡಿ 2019, ಬೆಂಗಳೂರು ದಿನಾಂಕ:27.12.2019 ರಲ್ಲಿ ದಿನಾಂಕ:01.01.2020 ರಿಂದ ದಿನಾಂಕ:31.03.2021 ರ ವರೆಗೆ ಯಾವುದೇ ತಾಲ್ಲೂಕು/ ಮುನಿಸಿಪಾಲಿಟಿ/ಗ್ರಾಮ ಪ್ರದೇಶಗಳ ಗಡಿ ಬದಲಾವಣೆಯನ್ನು ಹಾಗೂ ಹೊಸ ಸ್ಥಳೀಯ ಸಂಸ್ಥೆಗಳ ರಚನೆ ಕಾರ್ಯವನ್ನು ಸ್ಥಗಿತಗೊಳಿಸಲಾಗಿರುತ್ತದೆ. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರಿಂದ ಪ್ರಸ್ತಾವನೆ ಸ್ವೀಕೃತವಾದಲ್ಲಿ ರಾಯಚೂರು ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುವುದು.

(ಆ)	ಇದಕ್ಕೆ ಇರಬೇಕಾದ ಮಾನದಂಡಗಳೇನು;	ಮಹಾನಗರಪಾಲಿಕೆಗಳನ್ನಾಗಿ ಮೇಲ್ದರ್ಜೆಗೇರಿಸಬೇಕಾದಲ್ಲಿ ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರ ನಿಯಮ 3(1)ರ ಅನ್ವಯ ಈ ಕೆಳಕಂಡ ಮಾನದಂಡಗಳು ಇರುತ್ತದೆ. 1. ಅಂತಹ ಪ್ರದೇಶದ ಜನಸಂಖ್ಯೆ 3 ಲಕ್ಷಕ್ಕಿಂತ ಕಡಿಮೆ ಇಲ್ಲದ ಹೊರತು, 2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದುರ ಕಿ.ಮೀ. ವಿಸ್ತೀರ್ಣಕ್ಕೆ 3000 ಕ್ಕಿಂತ ಕಡಿಮೆ ಇಲ್ಲದಿರುವುದು, 3. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಆರು ಕೋಟಿ ಅಥವಾ ವಾರ್ಷಿಕ ತಲಾ ಒಬ್ಬರಿಗೆ 200 ರೂಪಾಯಿಗಳ ದರದಂತೆ ಲೆಕ್ಕಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು, 4. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು.

ಸಂಖ್ಯೆ: ನಅಇ 22 ಎಲ್‌ಸಿಕ್ಯೂ 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ
ಮತ್ತು ರೇಷ್ಮೆ ಸಚಿವರು